ಮೈಸೂರ ಗೆಜೆಟ್

ಸರ್ಕಾರದಿಂದ ಪ್ರಕಾಶಿಸಲ್ಪಟ್ಟದ್ದು.

ಬೆಂಗಳೂರು, ಶನಿವಾರ, ಮೇ ತಾ|| 18, ಸ್ಯ 1889.

ಸೂ|| ಈ ಭಾಗವನ್ನು ಪ್ರತ್ಯೇಕ ಕೆರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಪ್ಯೀರಿಯಲ್ ಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜೀರು, ವಗೈರೇರಿಂದ ಕೊಡೋಣದ ಇಸ್ತಿಹಾರ್‌ನಾಮೆಗಳು.

ಫೈನಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಸದರಿ ಲೋನಿನ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ - ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ಪೆಗದುಕೊಳ್ಳಲಿಕ್ಕೆ ಯಿಷ್ಟಪ್ಪುವಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜು ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿಸ್ಸ್,
ಕಾಂಪ್ಟ್ರೋಲರ್.

ಫಾರೆಸ್ಟ್ರಿ ಇಲಾಖಾ.

ತಾರೀಖು 6ನೇ ಮೇ 1889ನೇ ಇಸವಿ.

ಇದರಿಂದ ತಿಳಿಯಪಡಿಸುವದೇನಂದರೆ, ಈ ಕೆಳಗೆ ನಮೂದಿಸಲ್ಪಡುವ ಪಸಾರೇ ಜಿನಸು ಮತ್ತು ತುಮಕೂರು ಡಿಪೋದಲ್ಲಿ ಜಮಾಯಿಸಿ ಯಿರುವ ಕರಟು ತೇಗದ ಮರಗಳು 1889ನೇ ಇಸವಿ ಜೂನ್ 12ನೇ ತಾರೀಖು ಬುಧವಾರ ದಿನ ಬರ್ಜ ಡಿಪೋವಲ್ಲಿ ಬಹಿರಂಗವಾಗಿ ಹರಾಜು ಮಾಡಲ್ಪಡುತ್ತೆ.

ಪಪ್ಪಳಿ ಚಕ್ಕೆ	ಸುಮಾರು	50 ಮಣ
ಕಪಿಲಾರಂಗು	,,	10 ಡಿಟೋ
ತೇಗೇಕಾಯಿ	,,	50 ಡಿಟೋ
ಗೇರು	,,	2 ಖಂಡಿಗಳು
ಹೊಂಗೇಕಾಯಿ	,,	40 ಡಿಟೋ
ಹುಣಕೇಹಣ್ಣು ಬೀಜ ಸಮೇತ	,,	150 ಮಣಗಳು
ಆಳಲೇಕಾಯಿ	,,	50 ಡಿಟೋ
ಕಾಪಿನ ಮಾಡಿದ ಕರಟು ತೇಗದ ಮರಗಳು ಸುಮಾರು		200

ಪಿ. ಕೃಷ್ಣಸ್ವಾಮಯ್ಯಂಗಾರ್,